# ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ

ಮಲ್ಲೇಶ್ವರಂ, ಬೆಂಗಳೂರು–560003.

# KARNATAKA SECONDARY EDUCATION EXAMINATION BOARD

Malleshwaram, Bengaluru – 560003.

## 2020-21 ಸಾಲಿನ ಮಾದರಿ ಪ್ರಶ್ನೆ ಪತ್ರಿಕೆ – 2

**ವಿಷಯ : ಪ್ರಥಮ ಭಾಷೆ – ಕನ್ನಡ** **ವಿಷಯ ಸಂಕೇತ : 01-K**

**ಅವಧಿ : 3 ಗಂಟೆ 15 ನಿಮಿಷ** **ಗರಿಷ್ಠ ಅಂಕಗಳು : 100**

**ಶಾಲಾ ಅಭ್ಯರ್ಥಿಗಳಿಗೆ**

---

### ಪರೀಕ್ಷಾರ್ಥಿಗಾಗಿ ಸಾಮಾನ್ಯ ಸೂಚನೆಗಳು :

1. ಈ ಪ್ರಶ್ನೆಪತ್ರಿಕೆಯು ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ 45 ಪ್ರಶ್ನೆಗಳನ್ನು ಹೊಂದಿದೆ.
2. ಈ ಪ್ರಶ್ನೆಪತ್ರಿಕೆಯನ್ನು ಹಿಮ್ಮುಖ ಜಾಕೆಟ್ ಮೂಲಕ ಮೊಹರು (ಸೀಲ್) ಮಾಡಲಾಗಿದೆ. ಪರೀಕ್ಷೆ ಪ್ರಾರಂಭವಾಗುವ ಸಮಯಕ್ಕೆ ನಿಮ್ಮ ಪ್ರಶ್ನೆಪತ್ರಿಕೆಯ ಬಲಬದಿ ಪಾರ್ಶ್ವವನ್ನು ಕತ್ತರಿಸಿ, ಪ್ರಶ್ನೆಪತ್ರಿಕೆಯಲ್ಲಿ ಎಲ್ಲಾ ಪುಟಗಳು ಇವೆಯೇ ಎಂದು ಪರೀಕ್ಷಿಸಿಕೊಳ್ಳಿ.
3. ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಪ್ರಶ್ನೆಗಳಿಗೆ ಕೊಟ್ಟಿರುವ ಸೂಚನೆಗಳನ್ನು ಪಾಲಿಸಿ.
4. ಬಲ ಭಾಗದಲ್ಲಿ ಕೊಟ್ಟಿರುವ ಅಂಕಿಗಳು ಪ್ರಶ್ನೆಗಳಿಗಿರುವ ಪೂರ್ಣ ಅಂಕಗಳನ್ನು ತೋರಿಸುತ್ತವೆ.
5. ಪ್ರಶ್ನೆಪತ್ರಿಕೆಯನ್ನು ಓದಿಕೊಳ್ಳಲು 15 ನಿಮಿಷಗಳ ಕಾಲಾವಕಾಶವು ಸೇರಿದಂತೆ, ಉತ್ತರಿಸಲು ನಿಗದಿಪಡಿಸಲಾದ ಸಮಯವನ್ನು ಪ್ರಶ್ನೆಪತ್ರಿಕೆಯ ಮೇಲ್ಭಾಗದಲ್ಲಿ ನೀಡಲಾಗಿದೆ.

**I. ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಆಯ್ಕೆಗಳನ್ನು ನೀಡಲಾಗಿದೆ. ಅವುಗಳಲ್ಲಿ ಸೂಕ್ತವಾದ ಉತ್ತರವನ್ನು ಆರಿಸಿ ಕ್ರಮಾಕ್ಷರದೊಂದಿಗೆ ಬರೆಯಿರಿ.** **6 x 1 = 6**

1. ಕನ್ನಡ ವರ್ಣಮಾಲೆಯಲ್ಲಿರುವ ಅನುನಾಸಿಕ ಅಕ್ಷರಗಳು

   A. 13

   B. 25

   C. 05

   D. 10

2. ಒಂದು ಪದವನ್ನೋ ವಾಕ್ಯವನ್ನೋ ಹೇಳಿ ಅದಕ್ಕೆ ಸಮನಾರ್ಥಕ ಪದವನ್ನೋ ವಾಕ್ಯವನ್ನೋ ಹೇಳುವಾಗ ಈ ಚಿಹ್ನೆಯನ್ನು ಬಳಸಲಾಗುತ್ತದೆ.

   A. ಅಲ್ಪವಿರಾಮ

   B. ಆವರಣ

   C. ಉದ್ಧರಣ

   D. ಭಾವಸೂಚಕ

3. 'ಸಾವಿತ್ರಿಯೊಳ್' ಪದದಲ್ಲಿರುವ ವಿಭಕ್ತಿ

   A. ಪ್ರಥಮಾ

   B. ದ್ವಿತೀಯಾ

   C. ಸಪ್ತಮೀ

   D. ಪಂಚಮೀ

4. ಒಂದು ಅಥವಾ ಅನೇಕ ವಾಕ್ಯಗಳು ಒಂದು ಪ್ರಧಾನ ವಾಕ್ಯಕ್ಕೆ ಅಧೀನಗಳಾಗಿದ್ದರೆ ಅಂಥ ವಾಕ್ಯವನ್ನು ಹೀಗೆ ಕರೆಯುವರು

   A. ಸಾಮಾನ್ಯವಾಕ್ಯ

   B. ಪ್ರಶ್ನಾರ್ಥಕವಾಕ್ಯ

   C. ಸಂಯೋಜಿತವಾಕ್ಯ

   D. ಮಿಶ್ರವಾಕ್ಯ

5. ಅನುನಾಸಿಕ ಸಂಧಿಗೆ ಉದಾಹರಣೆಯಾದ ಪದವಿದು

   A. ಸನ್ಮಾನ

   B. ವಾಗ್ದೇವಿ

   C. ಏಕೈಕ

   D. ಸೂರ್ಯೋದಯ

6. 'ಸಾಕು' ಪದವು ಈ ಅವ್ಯಯಕ್ಕೆ ಉದಾಹರಣೆಯಾಗಿದೆ.

   A. ಅನುಕರಣಾವ್ಯಯ

   B. ಕ್ರಿಯಾರ್ಥಕಾವ್ಯಯ

   C. ಸಂಬಂಧಾರ್ಥಕಾವ್ಯಯ

   D. ಅವಧಾರಣಾರ್ಥಕಾವ್ಯಯ

**II. ಕೆಳಗಿನವುಗಳಲ್ಲಿ ಮೊದಲೆರಡು ಪದಗಳಿಗಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸರಿಹೊಂದುವ ಸಂಬಂಧೀ ಪದವನ್ನು ಬರೆಯಿರಿ. 4 x 1 = 4**

7. ಪಾದುಕಾ : ಹಾವುಗೆ : : ವೈಶಾಖ : ____________

8. ಇಸವಾಸ : ವಿಶ್ವಾಸ : : ಮ್ಯಾಗ : ____________

9. ಇಮ್ಮಾವು : ಕರ್ಮಧಾರಯಸಮಾಸ : : ಸಪ್ತಸ್ವರಗಳು : ____________

10. ಮಧುಕರ : ದುಂಬಿ : : ಸುರಭಿ : ____________

**III. ಕೆಳಗಿನ ಪ್ರತಿಯೊಂದು ಪ್ರಶ್ನೆಗಳಿಗೆ ಒಂದೊಂದು ವಾಕ್ಯದಲ್ಲಿ ಉತ್ತರ ಬರೆಯಿರಿ. 7 x 1 = 7**

11. ರಾಹಿಲನು ತುರ್ತು ಪರಿಸ್ಥಿತಿ ನಿರ್ವಹಣೆಗೆ ಭದ್ರವಾಗಿ ಹಿಡಿದುಕೊಂಡಿದ್ದೇನು?

12. 'ಕೈಗಾರಿಕೀಕರಣ ಇಲ್ಲವೆ ಅವನತಿ' ಎಂಬ ಘೋಷಣೆಯನ್ನು ಯಾರು ಮಾಡಿದರು?

13. ವಚನಕಾರರಿಗೆ ಯಾವುದು ದೇವರಾಗಿತ್ತು?

14. ಶಾನುಭೋಗರ ರಾಜಭಕ್ತಿಯ ಲಾಂಛನ ಯಾವುದು?

15. ಕವಿ ಕುವೆಂಪುರವರ ಪ್ರಕಾರ ಕಡಲು ಹಸಿರಾಗಿ ಕಾಣಲು ಕಾರಣವೇನು?

16. ದುರ್ಯೋಧನನು ಭೀಷ್ಮರ ಬಳಿಗೆ ಏಕೆ ಬಂದನು?

17. ಭಗತ್‌ಸಿಂಗ್ ತನ್ನ ಸಹೋದರಿಗೆ ಮಣ್ಣು ಯಾವುದರ ಪ್ರತೀಕ ಎಂದು ತೋರಿಸುತ್ತಾನೆ?

**IV. ಕೆಳಗಿನ ಪ್ರಶ್ನೆಗಳಿಗೆ ಮೂರು ಅಥವಾ ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ. 10 x 2 = 20**

18. ಆತಿಥ್ಯ ಸ್ವೀಕರಿಸಿದ ರಾಮಲಕ್ಷ್ಮಣರು ಶಬರಿಗೆ ಏನು ಹೇಳಿದರು?

19. ನೆಹರೂ ಅವರು ಸರ್.ಎಂ. ವಿಶ್ವೇಶ್ವರಯ್ಯ ಅವರ ಬಗ್ಗೆ ಏನೆಂದು ಹೇಳಿದ್ದಾರೆ?

20. ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ ಸ್ಥಾಪಿಸಿದ ನ್ಯಾಯ ವಿಧಾಯಕ ಸಭೆಯನ್ನು ಕುರಿತು ಬರೆಯಿರಿ.

21. ದುಷ್ಟಬುದ್ಧಿಯು ತನ್ನ ತಂದೆಗೆ ಏಕಾಂತದಲ್ಲಿ ಏನು ಹೇಳಿದನು?

22. ಹಲಗಲಿಗೆ ದಂಡು ಬರಲು ಕಾರಣವೇನು?

23. ಕೃಷ್ಣನು ಕೌರವೇಂದ್ರನನ್ನು ಕೊಂದನು ಎಂದು ಕರ್ಣ ಹೇಳಲು ಕಾರಣವೇನು?

24. ವಿವೇಕಾನಂದರು ಜಾತಿ ಮತ್ತು ವರ್ಗ ವ್ಯವಸ್ಥೆಯನ್ನು ಏಕೆ ವಿರೋಧಿಸಿದ್ದರು?

25. ಡಾ. ವಿಜಯಶ್ರೀ ಸಬರದ ಅವರ ಪ್ರಕಾರ ಪುಟ್ಟಿಯು ವಾಸವಿದ್ದ ಗುಡಿಸಲಿನ ಪರಿಸರ ಹೇಗಿತ್ತು?

26. ಭಗತ್‌ಸಿಂಗ್ ಹುತಾತ್ಮನಾದ ಬಗೆಯನ್ನು ತಿಳಿಸಿ.

27. ಕೆಸರಿಗೂ ಕಮಲಕ್ಕೂ ಇರುವ ಸಂಬಂಧವನ್ನು ಒಗಟು ಹೇಗೆ ವಿವರಿಸುತ್ತದೆ?

**V. ಕೆಳಗಿನ ಕವಿಗಳ / ಸಾಹಿತಿಗಳ ಜನ್ಮಸ್ಥಳ, ಕಾಲ, ಕೃತಿ ಮತ್ತು ಬಿರುದು / ಪ್ರಶಸ್ತಿಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ. 2 x 3 = 6**

28. ದೇವನೂರು ಮಹಾದೇವ

29. ರನ್ನ

**VI. ಕೆಳಗಿನ ಪದ್ಯಭಾಗಕ್ಕೆ ಪ್ರಸ್ತಾರ ಹಾಕಿ, ಗಣ ವಿಭಾಗ ಮಾಡಿ ಛಂದಸ್ಸಿನ ಹೆಸರನ್ನು ಬರೆಯಿರಿ. 1 x 3 = 3**

30. ಎನ್ನಣುಗಾಳನೆನ್ನಣುಗದಮ್ಮನನಿಕ್ಕಿದ ಪಾರ್ಥಭೀಮರು

**VII. ಕೆಳಗಿನ ವಾಕ್ಯದಲ್ಲಿರುವ ಅಲಂಕಾರವನ್ನು ಹೆಸರಿಸಿ, ಲಕ್ಷಣ ಬರೆದು ಸಮನ್ವಯಗೊಳಿಸಿ. 1 x 3 = 3**

31. ಸೀತೆಯ ಮುಖ ಕಮಲದಂತೆ ಅರಳಿತು.

**VIII. ಕೆಳಗಿನ ಗಾದೆಗಳಲ್ಲಿ ಯಾವುದಾದರೂ ಒಂದನ್ನು ಗಾದೆಯ ಮಹತ್ವದೊಂದಿಗೆ ವಿಸ್ತರಿಸಿ ಬರೆಯಿರಿ. 1 x 3 = 3**

32. ಕೂಡಿ ಬಾಳಿದರೆ ಸ್ವರ್ಗಸುಖ

ಅಥವಾ

ಬೆಳೆಯುವ ಸಿರಿ ಮೊಳಕೆಯಲ್ಲಿ

**IX. ಕೆಳಗಿನ ವಾಕ್ಯ ಅಥವಾ ಹೇಳಿಕೆಗಳಿಗೆ ಸಂದರ್ಭ ಮತ್ತು ಸ್ವಾರಸ್ಯಗಳನ್ನು ಬರೆಯಿರಿ.** **6 x 3 = 18**

33. "ತಾಯಿ, ದಾರಿಗರಿಗೆ ಬೀಡಿಲ್ಲಿ ದೊರೆಯುವುದೇ?"

34. "ಸ್ವಧರ್ಮೇ ನಿಧನಂ ಶ್ರೇಯ:"

35. "ಈತನ ಮಾತು ಅಶ್ರುತಪೂರ್ವಮ್"

36. "ಹೊಡೆದರೊ ಗುಂಡ ಕರುಣ ಇಲ್ಲದ್ಹಂಗ"

37. "ಬಾಯ್ದಂಬುಲಕೆ ಕೈಯಾನುವರೆ"

38. "ಹಸುರು ಹಸುರಿಳೆಯುಸಿರೂ!"

**X. ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿ ಬರೆಯಿರಿ.** **1 x 4 = 4**

39. ನೀಲ ಮೇಘ ಮಂಡಲ ________________

________________________________

________________________________

________________________________ ಕಣ್ಣಾ

ಹಕ್ಕಿ ಹಾರುತಿದೆ ನೋಡಿದಿರಾ?

ಅಥವಾ

ಯುಗ–ಯುಗಗಳ ____________________

________________________________

________________________________

________________________________ ಹರಸಿ

ಹಕ್ಕಿ ಹಾರುತಿದೆ ನೋಡಿದಿರಾ?

**XI. ಕೆಳಗಿನ ಪದ್ಯಭಾಗವನ್ನು ಓದಿ ಅರ್ಥಮಾಡಿಕೊಂಡು, ಅಡಕವಾಗಿರುವ ಮೌಲ್ಯವನ್ನಾಧರಿಸಿ ಸಾರಾಂಶ ಬರೆಯಿರಿ.** **1 x 4 = 4**

40. ಬಿದ್ದುದನ್ನು ಮೇಲೆಬ್ಬಿಸಿ ನಿಲ್ಲಿಸಿ
ಹೊಸ ಭರವಸೆಗಳ ಕಟ್ಟೋಣ
ಮನುಜರ ನಡುವಣ ಅಡ್ಡಗೋಡೆಗಳ
ಕೆಡವುತ ಸೇತುವೆಯಾಗೋಣ.

**XII. ಕೆಳಗಿನ ಪ್ರಶ್ನೆಗಳಿಗೆ ಎಂಟು ಅಥವಾ ಹತ್ತು ವಾಕ್ಯಗಳಲ್ಲಿ ಉತ್ತರ ಬರೆಯಿರಿ.** **2 x 4 = 8**

41. ಮುದುಕಿಯು ತನ್ನ ಮಗನು ಯುದ್ಧಕ್ಕೆ ಹೋದ ಸಂದರ್ಭವನ್ನು ಹೇಗೆ ವಿವರಿಸಿದಳು?

ಅಥವಾ

ರಾಹಿಲನು ಮುದುಕಿಯ ಕುಟುಂಬಕ್ಕೂ, ಮುದುಕಿಯು ರಾಹಿಲನಿಗೂ ಮಾಡಿದ ಸಹಾಯವನ್ನು ಸಂಕ್ಷಿಪ್ತವಾಗಿ ವಿವರಿಸಿ.

42. ಲವನು ಯಜ್ಞಾಶ್ವವನ್ನು ಕಟ್ಟಲು ಕಾರಣವಾದ ಅಂಶಗಳನ್ನು ವಿವರಿಸಿ.

ಅಥವಾ

ಲವನ ಧೈರ್ಯ ಮತ್ತು ಸಾಹಸ ವೀರಲವ ಪದ್ಯದಲ್ಲಿ ಹೇಗೆ ಮೂಡಿ ಬಂದಿದೆ ವಿವರಿಸಿ.

**XIII. ಕೆಳಗಿನ ಗದ್ಯಭಾಗವನ್ನು ಮನಸ್ಸಿನಲ್ಲಿ ಓದಿಕೊಂಡು ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ.** **1 x 4 = 4 (2 + 2)**

ಕಡಿದಾಳ್ ಮಂಜಪ್ಪನವರ ಕಾಲದಲ್ಲಿ ಮಹಾರಾಜಾ ಕಾಲೇಜು ಸಂಸ್ಕೃತಿ ಮತ್ತು ಜ್ಞಾನದ ದೇಗುಲದಂತಿತ್ತು. ಇಂದಿನಂತೆ ವಿದ್ಯಾರ್ಥಿ ಮತ್ತು ಉಪಾಧ್ಯಾಯರ ಚಳುವಳಿಯಿರಲಿಲ್ಲ. ಕಾಲೇಜಿನ ಶಿಕ್ಷಕ ವರ್ಗದವರು ಅಲ್ಪ ಸಂಬಳ ಬರುತ್ತಿದ್ದರೂ ತಮ್ಮ ವೃತ್ತಿ ಪವಿತ್ರವಾದುದೆಂಬ ತೃಪ್ತಿಯಿಂದ ಕಾರ್ಯನಿರ್ವಹಿಸುತ್ತಿದ್ದರು. ಅವರಲ್ಲಿ ಜ್ಞಾನ ಸಂಪತ್ತಿನ ಜತೆಗೆ ನೈತಿಕ ಸಂಪತ್ತು ಇತ್ತು. ಮಹಾರಾಜಾ ಕಾಲೇಜಿನಲ್ಲಿಯೂ ನನಗೆ ವಿದ್ಯಾರ್ಥಿ ವೇತನ ಲಭ್ಯವಾಗಿತ್ತು. ವಿದ್ಯಾರ್ಥಿ ವೇತನದ ಮೊತ್ತ ತಿಂಗಳಿಗೆ ಹದಿನೆಂಟು ರೂಪಾಯಿ. ವಿದ್ಯಾರ್ಥಿ ವೇತನ ಪಡೆಯುತ್ತಿದ್ದವರಿಗೆ ಕಾಲೇಜಿನ ಶುಲ್ಕವಿರಲಿಲ್ಲ.

ಕಾಲೇಜಿನಲ್ಲಿ ಬಿಡುವಿದ್ದಾಗ ಕಡಿದಾಳ ಮಂಜಪ್ಪನವರು ವಾಚನಾಲಯದಲ್ಲಿ ಇದ್ದ ದಿನಪತ್ರಿಕೆಗಳನ್ನು ತಪ್ಪದೆ ಓದುತ್ತಿದ್ದರು. ಮಹಾತ್ಮಾಗಾಂಧಿಯಂತಹ ರಾಷ್ಟ್ರಭಕ್ತರ ಭಾಷಣಗಳೂ, ಲೇಖನಗಳೂ ಅವರ ಮನಸ್ಸಿನ ಮೇಲೆ ಬಹಳ ಪರಿಣಾಮವನ್ನುಂಟು ಮಾಡಿದ್ದವು. ದಿನಪತ್ರಿಕೆಗಳಲ್ಲೂ ವಿಚಾರ ಸಂಕಿರಣಗಳಲ್ಲೂ ರಾಜಕಾರಣ ಮತ್ತು ಅರ್ಥಶಾಸ್ತ್ರಕ್ಕೆ ಸಂಬಂಧಪಟ್ಟ ಲೇಖನಗಳನ್ನು ಓದುತ್ತಿದ್ದರಿಂದ ಪರೀಕ್ಷಾ ವಿಷಯಗಳಾಗಿದ್ದ ರಾಜಕೀಯಶಾಸ್ತ್ರ ಮತ್ತು ಅರ್ಥ ಶಾಸ್ತ್ರಗಳಿಗೆ ಸಂಬಂಧಪಟ್ಟ ವಿಚಾರಗಳು ತಿಳಿಯುತ್ತಿದ್ದವು. ಹೇಗಲ್, ಕ್ಯಾಂಟ್, ವಾಲ್ಟೇರ್, ರೂಸ್ಸೋ ಮುಂತಾದ ದಾರ್ಶನಿಕ ಕೃತಿಗಳನ್ನೂ ಗ್ರೀಕ್

ಮಹಾಕವಿ ಹೋಮರನ 'ಇಲಿಯಡ್ ಮತ್ತು ಒಡಿಸ್ಸಿ' ಮಹಾಕಾವ್ಯಗಳನ್ನೂ, ಗಿಬ್ಬನ್ನ ಅವರ 'ಉನ್ನತಿ ಮತ್ತು ಅವನತಿ' ಗ್ರಂಥವನ್ನೂ ರವೀಂದ್ರನಾಥ ಟಾಗೋರ, ಬರ್ನಾರ್ಡ್ ಷಾ, ಟಾಲ್‌ಸ್ಟಾಯ್ ಮುಂತಾದವರ ಕೃತಿಗಳನ್ನು ಓದಿರುವುದರಿಂದ ಅವರ ಮನಸ್ಸು ಬಹಳ ವಿಕಾಸಗೊಂಡಿತ್ತು. ಅಂದು ಜ್ಞಾನ ಸಂಪಾದನೆ ವಿದ್ಯಾರ್ಥಿಗಳ ಮುಖ್ಯ ಗುರಿಯಾಗಿದ್ದರೆ; ಇಂದು ಪರೀಕ್ಷೆಯಲ್ಲಿ ಹೇಗಾದರೂ ಮಾಡಿ ಉತ್ತೀರ್ಣರಾಗುವುದು ಗುರಿಯಾಗಿದೆ.

43. ಪ್ರಶ್ನೆಗಳು

ಅ) ಕಾಲೇಜಿಗೆ ಬಿಡುವಿದ್ದಾಗ ಮಂಜಪ್ಪ ಅವರು ಅಧ್ಯಾಯನ ಮಾಡುತ್ತಿದ್ದ ಪ್ರಮುಖ ಗ್ರಂಥಗಳಾವುವು?

ಬ) ಕಡಿದಾಳ ಮಂಜಪ್ಪನವರ ಕಾಲದಲ್ಲಿ ಮಹಾರಾಜ ಕಾಲೇಜಿನ ಶೈಕ್ಷಣಿಕ ವಾತಾವರಣ ಹೇಗಿತ್ತು?

**XIV. ಕೆಳಗಿನ ಯಾವುದಾದರೂ ಒಂದಕ್ಕೆ ಕೊಟ್ಟಿರುವ ಮಾಹಿತಿಯನ್ನು ಆಧರಿಸಿ ಪತ್ರ ಬರೆಯಿರಿ. 1 x 5 = 5**

44. ನಿಮ್ಮನ್ನು ಧಾರವಾಡದ ಸರ್ಕಾರಿ ಪ್ರೌಢಶಾಲೆಯ 'ಸುಬೋಧ' ಎಂದು ಭಾವಿಸಿಕೊಂಡು, ಶಾಲೆಯಲ್ಲಿ ಶುದ್ಧ ಕುಡಿಯುವ ನೀರಿನ ಘಟಕವನ್ನು ಸ್ಥಾಪಿಸುವಂತೆ ಕೋರಿ, ಗ್ರಾಮ ಪಂಚಾಯತಿಯ ಅಧ್ಯಕ್ಷರಿಗೊಂದು ಮನವಿ ಪತ್ರ ಬರೆಯಿರಿ.

ಅಥವಾ

ನಿಮ್ಮನ್ನು ಬೆಳಗಾವಿಯ ಸರ್ಕಾರಿ ಪ್ರೌಢಶಾಲೆಯ 'ತೇಜಸ್ವಿ' ಎಂದು ಭಾವಿಸಿಕೊಂಡು ವಾರ್ಷಿಕ ಪರೀಕ್ಷೆಯ ಸಿದ್ಧತೆಯನ್ನು ಕುರಿತು ರಾಯಚೂರಿನ ನಿಜಲಿಂಗಪ್ಪ ಬಡಾವಣೆಯಲ್ಲಿ ವಾಸವಾಗಿರುವ 'ಶ್ರೀನಿವಾಸ' ಎಂಬ ಹೆಸರಿನ ತಂದೆಯವರಿಗೆ ಒಂದು ಪತ್ರವನ್ನು ಬರೆಯಿರಿ.

**XV. ಕೆಳಗಿನ ಯಾವುದಾದರೂ ಒಂದು ವಿಷಯದಲ್ಲಿ ಹದಿನೈದು ವಾಕ್ಯಗಳಿಗೆ ಕಡಿಮೆಯಿಲ್ಲದಂತೆ ಪ್ರಬಂಧ ಬರೆಯಿರಿ. 1 x 5 = 5**

45. ಜಲಸಂರಕ್ಷಣೆಯ ಪ್ರಾಮುಖ್ಯತೆ

ಅಥವಾ

ಗ್ರಾಮ ಸ್ವರಾಜ್ಯ